ಕರ್ನಾಟಕ ಸರ್ಕಾರ

ತಾಂತ್ರಿಕ ಶಿಕ್ಷಣ ಇಲಾಖೆ

DTE-ADMI0ACM2/19/2023

ಆಯುಕ್ತರ ಕಛೇರಿ,
ತಾಂತ್ರಿಕ ಶಿಕ್ಷಣ ಭವನ,
ಅರಮನೆ ರಸ್ತೆ, ಬೆಂಗಳೂರು-560 001.
ದಿನಾಂಕ:02-06-2023.

-:: ಸು ತ್ತೋಲೆ::-

**ವಿಷಯ:** 2023-24ನೇ ಸಾಲಿನ ಡಿಪ್ಲೋಮಾ ಪ್ರವೇಶ – ಖಾಸಗಿ ಪಾಲಿಟೆಕ್ನಿಕ್‌ಗಳಿಗೆ ಪ್ರವೇಶಾವಧಿಯನ್ನು ವಿಸ್ತರಿಸುವ ಬಗ್ಗೆ.

**ಉಲ್ಲೇಖ:** ಈ ಕಛೇರಿಯ ಪ್ರವೇಶಾಧಿಸೂಚನೆ ಪತ್ರ ಸಂ. DTE-ADMI0ACM2/18/2023, ದಿ:08-05-2023.

*******

ಉಲ್ಲೇಖಿತ ಈ ಕಛೇರಿಯ ಪ್ರವೇಶಾಧಿಸೂಚನೆಯಲ್ಲಿ 2023-24ನೇ ಸಾಲಿನ ಪ್ರಥಮ ಡಿಪ್ಲೋಮಾ ಪ್ರವೇಶಕ್ಕೆ ಸಂಬಂಧಿಸಿದಂತೆ, ರಾಜ್ಯದ ಎಲ್ಲಾ ಖಾಸಗಿ ಪಾಲಿಟೆಕ್ನಿಕ್‌ಗಳಲ್ಲಿನ ಪ್ರವೇಶಕ್ಕೆ ದಿನಾಂಕ:31-05-2023 ಕೊನೆಯ ದಿನಾಂಕವನ್ನಾಗಿ ನಿಗಧಿಪಡಿಸಲಾಗಿತ್ತು.

ಆದರೆ, ಪ್ರವೇಶ ಅವಧಿಯನ್ನು ವಿಸ್ತರಿಸಲು ಪಾಲಿಟೆಕ್ನಿಕ್‌ನ ಪ್ರಾಂಶುಪಾಲರುಗಳು ಕೋರಿರುವುದನ್ನು ಪರಿಗಣಿಸಿ ಒಟ್ಟಾರೆ ಸಂಸ್ಥೆಗಳ ಹಾಗೂ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯ ಮೇರೆಗೆ ಪ್ರವೇಶಾವಧಿಯನ್ನು **ದಿ:20-06-2023 ರವರೆಗೆ** ವಿಸ್ತರಿಸಿ ಅನುಮತಿ ನೀಡಲಾಗಿದೆ.

ಪ್ರಾಂಶುಪಾಲರು ಕೂಡಲೇ ಈ ಬಗ್ಗೆ ಕ್ರಮ ತೆಗೆದುಕೊಂಡು ಸ್ಥಳೀಯವಾಗಿ ಪತ್ರಿಕಾ ಪ್ರಕಟಣೆಯನ್ನು ನೀಡುವುದು. ಸಂಸ್ಥೆಯ ಸೂಚನಾಫಲಕದಲ್ಲಿ ಪ್ರಕಟಿಸಿ ವಿದ್ಯಾರ್ಥಿ/ಪೋಷಕರುಗಳ ಗಮನಕ್ಕೆ ತರಲು ಸೂಚಿಸಿದೆ. ಪ್ರಯುಕ್ತ, ಇದನ್ನು ಖಾಸಗಿ/ಅನುದಾನಿತ ಪಾಲಿಟೆಕ್ನಿಕ್‌ನ ಪ್ರಿನ್ಸಿಪಾಲರು ಗಮನದಲ್ಲಿರಿಸಿಕೊಂಡು ನಿಯಮಗಳ ಪ್ರಕಾರ ಪ್ರವೇಶವನ್ನು ಪೂರೈಸುವಲ್ಲಿ ಕ್ರಮ ತೆಗೆದುಕೊಳ್ಳಬೇಕೆಂದು ತಿಳಿಸಲಾಗಿದೆ.

*"ಟಿಪ್ಪಣಿ ಮಾನ್ಯ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ"*

K.G. 02/06/23
ನಿರ್ದೇಶಕರು
ತಾಂತ್ರಿಕ ಶಿಕ್ಷಣ ಇಲಾಖೆ
ಬೆಂಗಳೂರು

ಇವರಿಗೆ,

*ಎಲ್ಲಾ ಖಾಸಗಿ ಹಾಗೂ ಅನುದಾನಿತ ಪಾಲಿಟೆಕ್ನಿಕ್‌ಗಳ ಪ್ರಿನ್ಸಿಪಾಲರಿಗೆ - ಸೂಕ್ತ ಮಾಹಿತಿಗಾಗಿ ಮತ್ತು ಅನುಸರಣೆಗಾಗಿ*

<u>ಪ್ರತಿ ಇವರಿಗೆ ಮಾಹಿತಿಗಾಗಿ:</u>

1. ಆಯುಕ್ತರವರ ಆಪ್ತಶಾಖೆಗೆ.
2. ನಿರ್ದೇಶಕರವರ ಆಪ್ತಶಾಖೆಗೆ.
3. ಕಾರ್ಯದರ್ಶಿಯವರ ಆಪ್ತಶಾಖೆಗೆ.
4. ಇ-ಗವರ್ನೆನ್ಸ್ ವಿಭಾಗಕ್ಕೆ - ವೆಬ್‌ಸೈಟ್‌ನಲ್ಲಿ ಪ್ರಚುರಪಡಿಸುವುದು.
5. ಡಿಪಿಪಿ(2) ವಿಭಾಗಕ್ಕೆ
6. ಇಆರ್‌ಎಸ್(3) ವಿಭಾಗಕ್ಕೆ – ಸಿಬಿಎಸ್‌ಇ/ಐಸಿಎಸ್‌ಇ ಹಾಗೂ ಕರ್ನಾಟಕೇತರ ವಿದ್ಯಾರ್ಥಿಗಳಿಗೆ ಅರ್ಹತಾ ಪ್ರಮಾಣ ಪತ್ರ ವಿತರಿಸುವ ಬಗ್ಗೆ ಕ್ರಮತೆಗೆದುಕೊಳ್ಳುವುದು.
7. ಕಛೇರಿ ಪ್ರತಿ.